ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

6

ಇಲಾಖೆ / ವಿಷಯ : DEPARTMENT / SUBJECT: ಚುನಾವಣೆ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ ದಿನಾಂಕ : DATE : 30/8/2020

# ಎಲ್ಲ ಚುನಾವಣೆಗಳಿಗೆ ಒಂದೇ ಮತದಾರರ ಪಟ್ಟಿ: ಕೇಂದ್ರ ಚಿಂತನೆ

ಪ್ರ. ವಾ. 30. 8. 20

ನವದೆಹಲಿ (ಪಿಟಿಐ): ಲೋಕಸಭೆ, ವಿಧಾನಸಭೆ ಮತ್ತು ಸ್ಥಳೀಯ ಸಂಸ್ಥೆಗಳ ಚುನಾವಣೆಗಳ ಮತಪಟ್ಟಿಯಲ್ಲಿ ಇರುವ ಗೊಂದಲ ತಪ್ಪಿಸುವ ಸಲುವಾಗಿ ಏಕರೂಪದ ಮತದಾರರ ಪಟ್ಟಿ ರೂಪಿಸುವ ಕುರಿತು ಕೇಂದ್ರ ಸರ್ಕಾರ ಚಿಂತನೆ ನಡೆಸಿದೆ.

ಸದ್ಯ, ಚುನಾವಣಾ ಆಯೋಗ ಲೋಕಸಭೆ ಮತ್ತು ವಿಧಾನಸಭೆ ಚುನಾವಣೆಗೆ ಮತದಾರರ ಪಟ್ಟಿ ರೂಪಿಸುತ್ತಿದೆ. ರಾಜ್ಯದ ಆಯೋಗಗಳು ನಗರಸಭೆ, ಪಂಚಾಯಿತಿ ಚುನಾವಣೆಗಳಿಗೆ ಪ್ರತ್ಯೇಕವಾಗಿ ಪಟ್ಟಿ ರಚಿಸುತ್ತಿದೆ. ಬಹುತೇಕ ರಾಜ್ಯಗಳಲ್ಲಿ ಸ್ಥಳೀಯ ಸಂಸ್ಥೆಗಳಿಗೆ ಮತದಾರರ ಪಟ್ಟಿ ರಚಿಸಲು ಕೇಂದ್ರ ಆಯೋಗ ರಚಿಸುವ ಮತದಾರ ಪಟ್ಟಿಯನ್ನೇ ಆಧಾರವಾಗಿ ಬಳಸಲಾಗುತ್ತದೆ.

ಈಗ ಕೇಂದ್ರ ಸರ್ಕಾರವು ಎಲ್ಲ ಚುನಾವಣೆಗಳಿಗೆ ಅನ್ವಯವಾಗುವಂತೆ ಏಕರೂಪದ ಮತದಾರ ಪಟ್ಟಿ ರೂಪಿಸುವ ಚಿಂತನೆ ನಡೆಸಿದೆ. ಇದರಿಂದ ಪ್ರತ್ಯೇಕ ಪಟ್ಟಿ ತಯಾರಿಸುವುದು ತಪ್ಪಲಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.